ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2019/237

ನಿರ್ದೇಶಕರವರ ಕಚೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ:25-06-2020.

## ಹಿಂಬರಹ

ಕರ್ನಾಟಕ ಸರ್ಕಾರದ ನಡವಳಿಗಳು: ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಆಇ 2(ಇ) ಸೇನಿಸೇ 2020 ಬೆಂಗಳೂರು ದಿನಾಂಕ:05-05-2020 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಪಿಟ್ ಸಂಸ್ಥೆ ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಪಿ.ಟಿ.ಎಸ್ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ (ಇಲಾಖಾ ವೆಬ್‌ಸೈಟ್ ಮುಖಾಂತರ)
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ.
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
5. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2020ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ರದ್ದುಗೊಳಿಸುವ ಬಗ್ಗೆ.

ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ: ಆಇ 4(ಇ) ಸೇನಿಸೇ 2019, ದಿನಾಂಕ 13.12.2019

ಪ್ರಸ್ತಾವನೆ:

ಮೇಲೆ ಓದಲಾದ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 118(2)ರ ಸೌಲಭ್ಯ ಪಡೆಯುವ ಸಲುವಾಗಿ, 2020ನೇ ಕ್ಯಾಲೆಂಡರ್ ವರ್ಷದಲ್ಲಿ 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅಧ್ಯರ್ಪಿಸಿ, ರಜಾ ವೇತನಕ್ಕೆ ಸಮನಾದ ನಗದೀಕರಣ ಪಡೆಯಬಹುದಾದ ಸೌಲಭ್ಯವನ್ನು ಮಂಜೂರು ಮಾಡಿತ್ತು.

ಕೋವಿಡ್-19ರ ಹಿನ್ನೆಲೆಯಲ್ಲಿ ಸರ್ಕಾರವು ತೀವ್ರ ಆರ್ಥಿಕ ಬಿಕ್ಕಟ್ಟು ಎದುರಿಸುತ್ತಿರುವ ಹಿನ್ನೆಲೆಯಲ್ಲಿ 2020ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ರದ್ದುಗೊಳಿಸಲು ಸರ್ಕಾರ ತೀರ್ಮಾನಿಸಿ, ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಆಇ 2(ಇ) ಸೇನಿಸೇ 2020 ಬೆಂಗಳೂರು, ದಿನಾಂಕ:05.05.2020

2020ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ರದ್ದುಗೊಳಿಸಿದೆ. ಆದರೆ, ಜನವರಿ 2020 ರಿಂದ ಡಿಸೆಂಬರ್ 2020 ರಲ್ಲಿ ನಿವೃತ್ತಿ ಹೊಂದುವ ಎಲ್ಲಾ ಅರ್ಹ ನೌಕರರು/ಅಧಿಕಾರಿಗಳು, ಅವರು ನಿವೃತ್ತಿ ಹೊಂದುವ ತಿಂಗಳಲ್ಲಿ ಗಳಿಕೆ ರಜೆ ನಗದೀಕರಣ ಪ್ರಯೋಜನ ಪಡೆಯಲು ಅರ್ಹರಾಗಿರುತ್ತಾರೆ.

ಈ ಆದೇಶವು ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಸಂಸ್ಥೆಗಳ ನೌಕರರಿಗೂ ಅನ್ವಯಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಬಿ. ಹೇಮಣ್ಣ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1)

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.

...2/-

4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್‌ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
8. ಮಹಾಲೇಖಪಾಲರು (ಇ &ಆರ್‌ಎಸ್‌ಎ). ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್‌ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
9. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್‌ಬಾಕ್ಸ್ ಸಂಖ್ಯೆ-5329/5369, ಪಾರ್ಕ್ ಹೌಸ್‌ರೋಡ್, ಬೆಂಗಳೂರು.
10. ರಿಜಿಸ್ಟ್ರಾರ್‌ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
18. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರ ಪತ್ರ/ಶಾಖೆಯ ರಕ್ಷಾಕಡತ.

[ಕ್ರಮ ಸಂಖ್ಯೆ:6 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.